**ದಿನಾಂಕಃ 06-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ.ಎನ್ ಎಂ ಬಿ ವಕೀಲರಿಂದಃ**

1. ಅಪಘಾತ ದಿನ ನಾನು ಶಿರಸಿ ಯಿಂದ ಬನವಾಸಿಗೆ ಹೋಗುತ್ತಿದ್ದೆನು.ಆ ದಿನ ನಾನು ಬೈಕ್ ನಲ್ಲಿ ಹೋಗುತ್ತಿದ್ದೆನು. ಬೈಕನ್ನು ನಾನೇ ಓಡಿಸುತ್ತಿದ್ದೆನು. ನನಗೆ ಬೈಕ್ ಓಡಿಸಲು ಚಾಲನಾ ಪರವಾಗನಿಗೆ ಇತ್ತು ಮತ್ತು ಬೈಕ್ ಗೆ ಇನ್ಸುರೆನ್ಸ ಸಹ ಇತ್ತು. ಅದನ್ನು ಹಾಜರು ಪಡಿಸಲು ಯಾವುದೆ ತೊಂದರೆ ಇರುವುದಿಲ್ಲ. ನಾನು ಬೈಕ್ ನಲ್ಲಿ ಶಿರಸಿಯಿಂದ ಬನವಾಸಿಗೆ ಹೋಗುತ್ತಿದ್ದಾಗ ಲಾರಿ ಹಿಂದಿನಿಂದ ಬಂದು ನನಗೆ ಡಿಕ್ಕಿ ಪಡಿಸಿ ಅಪಘಾತ ಪಡಿಸಿರುತ್ತದೆ. ಲಾರಿ ಹಿಂದಿನಿಂದ ಡಿಕ್ಕಿ ಪಡಿಸಿದ್ದರೆ ನನ್ನ ಮೋಟಾರ್ ಸೈಕಲ್ ನ ಹಿಂಭಾಗ ಜಕಂ ಆಗಬೇಕಿತ್ತು ಎಂದರೆ ಸಾಕ್ಷಿ ಹಿಂಭಾಗ ಮತ್ತು ಮುಂಭಾಗ ಜಕಂ ಆಗಿದೆ ಎಂದು ಹೇಳುತ್ತಾರೆ. ಸಂಬಂಧಪಟ್ಟ ಮೋಟಾರ್ ನಿರೀಕ್ಷಕರು ವಾಹನಗಳನ್ನು ಪರೀಶೀಲನೆ ಮಾಡಿ ಮೋಟಾರ್ ನಿರೀಕ್ಷಕರ ವರದಿ ನೀಡಿರುತ್ತಾರೆ ಎಂದರೆ ಸರಿ. ಮೋಟಾರ್ ನಿರೀಕ್ಷಕರು ವಾಹನಗಳ ತಪಾಸಣೆ ಮಾಡಿ ವರದಿ ನೀಡಿರುತ್ತಾರೆ ಎಂದರೆ ಸರಿ. ನಿಪಿ-

4 ರಲ್ಲಿ ನನ್ನ ಮೋಟಾರ್ ಸೈಕಲ್ ಗೆ ಮುಂಭಾಗ ಮಾತ್ರ ಜಕಂ ಆದ ಬಗ್ಗೆ ಮೆಮೋ ಇರುತ್ತದೆ ಎಂದರೆ ಸರಿಯಲ್ಲ.

2. ನನಗೆ ಕನ್ನಡ ಓದಲು ಬರೆಯಲು ಬರುವುದಿಲ್ಲ. ನಾನು ಹಾಜರು ಪಡಿಸಿದ ದಾಖಲೆಗಳಲ್ಲಿ ಏನೇನು ಬರೆದಿದೆ ಎಂದು ತಿಳಿದುಕೊಂಡೆ ಹಾಜರು ಪಡಿಸಿರುತ್ತೇನೆ.ಈ ಅಪಘಾತ ಲಾರಿ ಚಾಲಕನ ತಪ್ಪಿನಿಂದ ಆಗಿರುವುದಿಲ್ಲ ನಾನೇ ಬಿದ್ದು ಪೆಟ್ಟು ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಪರಿಹಾರ ಬರುವುದಿಲ್ಲ ಎಂದು ಅಪಘಾತ ಲಾರಿಯ ಚಾಲಕನ ತಪ್ಪಿನಿಂದ ಆಗಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

3. ಅಪಘಾತ ವಾದ ತಕ್ಷಣ ಶಿರಸಿಯ ಪಂಡಿತ ಆಸ್ಪತ್ರೆ ಗೆ ಹೋಗಿದ್ದು ಅಲ್ಲಿ ಪ್ರಥಮ ಚಿಕಿತ್ಸೆ ಪಡೆದು ಅಲ್ಲಿಂದ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಹೋಗಿರುತ್ತೇನೆ. ಅಲ್ಲಿ 15 ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ನಂತರ ರಾಣೇಬೆನ್ನೂರು ಓಂ ಆಸ್ಪತ್ರೆ ಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ. ನನ್ನ ಅರ್ಜಿಯಲ್ಲಿ ರಾಣೇಬೆನ್ನೂರಿನಲ್ಲಿ ಚಿಕಿತ್ಸೆ ಪಡೆದ ಬಗ್ಗೆ ಎಲ್ಲಿಯೂ ಹೇಳಿಲ್ಲ ಎಂದರೆ ಸರಿ. ಮೆಗ್ಗಾನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಡಿಸ್ಚಾರ್ಜ ಆದ ನಂತರ ಓಂ ಆಸ್ಪತ್ರೆಗೆ ಸುಮಾರು 1 ವರೆ ವರ್ಷ ಬಿಟ್ಟು ಬಂದಿರುತ್ತೇನೆ. ನಿಪಿ-7 ಡಿಸ್ಚಾರ್ಜ ಸಮರಿಯ ಪ್ರಕಾರ ಕೇವಲ 2 ದಿನಗಳ ಕಾಲ ಮೆಗ್ಗಾನ್ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ಮೆಗ್ಗಾನ್ ಆಸ್ಪತ್ರೆಯ ವೈದ್ಯರು ನನ್ನನ್ನು ಪರೀಕ್ಷೆ ಮಾಡಿ ಏನೆಲ್ಲಾ ತೊಂದರೆ ಆಗಿದೆ ಎಂದು ಡಿಸ್ಚಾರ್ಜ ಸಮರಿಯಲ್ಲಿ ನಮೂದು ಮಾಡಿರುತ್ತಾರೆ ಎಂದರೆ ಸರಿ. ಅಪಘಾತದಲ್ಲಿ ನನ್ನ ಎಡಮುಂಗೈ, ಎಡಗಾಲಿಗೆ ಮೂಳೆ ಮುರಿತ ಆಗಿತ್ತು ಉಳಿದಂತೆ ದೇಹಕ್ಕೆ ಸಣ್ಣಪುಟ್ಟ ಗಾಯಗಳಾಗಿದ್ದವು. ಎಡಮುಂಗೈ ಮತ್ತು ಎಡಗಾಲಿಗೆ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ ಎಂದರೆ ಸರಿ. ನನಗೆ ಕೇವಲ ಬ್ಯಾಂಡೇಜ್ ಹಾಕಿ ಕಳುಹಿಸಿದ್ದರು ಎಂದರೆ ಸರಿ. ನನಗೆ ತೀವ್ರ ಸ್ವರೂಪದ ಗಾಯ ಆಗಿದ್ದರೆ ಹೆಚ್ಚಿನ ಚಿಕಿತ್ಸೆಯನ್ನು ಮೆಗ್ಗಾನ್ ಆಸ್ಪತ್ರೆ ಯವರೆ ಕೊಡುತ್ತಿದ್ದರು ಎಂದರೆ ಸರಿಯಲ್ಲ. ಚಿಕಿತ್ಸೆ ಸಮಯದಲ್ಲಿ ತೆಗೆದ ಎಕ್ಸರೆ ರಿಪೋರ್ಟಗಳನ್ನು ಹಾಜರು ಪಡಿಸಲು ತೊಂದರೆ ಇದೆಯಾ ಎಂದರೆ ಸಾಕ್ಷಿ ವೈದ್ಯರು ಅವುಗಳನ್ನು ನಮಗೆ ಕೊಟ್ಟಿಲ್ಲ ಎಂದು ಹೇಳುತ್ತಾರೆ.

4. ಮೆಗ್ಗಾನ್ ಆಸ್ಪತ್ರೆ ಸರ್ಕಾರಿ ಆಸ್ಪತ್ರೆ ಎಂದರೆ ಸರಿ. ಯಾವುದೆ ಎಕ್ಸರೆ ತೆಗೆದಿದ್ದರೆ ಅವರು ನಮಗೆ ಕೊಡುತ್ತಿದ್ದರು ಎಂದರೆ ಸರಿಯಲ್ಲ. ನಿಪಿ-8 ಅಂಗನ್ಯೂನ್ಯತೆ ಪ್ರಮಾಣ ಪತ್ರ ಕೊಡುವ ಸಮಯದಲ್ಲಿ ಎಕ್ಸರೆ ತೆಗೆದಿರುತ್ತಾರೆ. ಆ ಎಕ್ಸರೆ ಪಿಲ್ಮಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ. ಎಕ್ಸರೆ ಪಿಲ್ಮ ಪ್ರಕಾರ ನನಗೆ ಆದಂತಹ ಗಾಯಗಳು ಸಂಪೂರ್ಣ ಗುಣಮುಖವಾಗಿದ್ದವು ಎಂದರೆ ಸರಿಯಲ್ಲ. ನಿಪಿ-8 ರಲ್ಲಿ ನನಗೆ ಆದಂತಹ ಗಾಯಗಳು ಸಂಪೂರ್ಣ

ಕೂಡಿಕೊಂಡಿರುತ್ತವೆ ಎಂದು ಕೊಟ್ಟಿರುತ್ತಾರೆ ಎಂದರೆ ಸರಿ. ನನಗೆ ಕುಳಿತುಕೊಳ್ಳಲು ತೊಂದರೆ ಆಗುತ್ತದೆ ಎಂದು ನನ್ನ ಅಂಗನ್ಯೂನ್ಯತೆ ಪ್ರಮಾಣ ಪತ್ರದಲ್ಲಿ ಸುಳ್ಳು ಬರೆಯಿಸಿರುತ್ತೇನೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆದುಕೊಳ್ಳುವುದಕ್ಕೊಸ್ಕರ ಖೊಟ್ಟಿ ಅಂಗನ್ಯೂನ್ಯತೆ ಪ್ರಮಾಣ ಪತ್ರ ತಂದು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ.

5. ನಾನು ಚಿಕಿತ್ಸೆಗಾಗಿ ರೂ.2,50,000/- ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅದಕ್ಕೆ ಸಂಬಂಧಪಟ್ಟ ಹಾಗೆ ಯಾವುದೆ ಬಿಲ್ ಹಾಜರು ಪಡಿಸಿಲ್ಲ ಎಂದರೆ ಸರಿ. ಅಪಘಾತ ಕಾಲಕ್ಕೆ ನನಗೆ 65 ವರ್ಷ ವಯಸ್ಸಾಗಿತ್ತು ಎಂದರೆ ಸಾಕ್ಷಿ ನನಗೆ 55 ವರ್ಷ ವಯಸ್ಸಾಗಿತ್ತು ಎಂದು ಹೇಳುತ್ತಾರೆ. ನನ್ನ ವಯಸ್ಸನ್ನು ತೋರಿಸಲು ನನ್ನ ಆಧಾರ ಕಾರ್ಡ ಹಾಜರು ಪಡಿಸಿರುತ್ತೇನೆ. ಮೆಗ್ಗಾನ ಆಸ್ಪತ್ರೆಯಲ್ಲಿ ನನ್ನ ಆಧಾರ ಕಾರ್ಡನ್ನೆ ಕೊಟ್ಟಿರುತ್ತೇನೆ. ನಿಪಿ-7 ಬಿಡುಗಡೆ ಪ್ರಮಾಣ ಪತ್ರದಲ್ಲಿ ನನ್ನ ವಯಸ್ಸು 58 ಎಂದು ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಕೂಲಿ ಕೆಲಸ ಮಾಡಿ ತಿಂಗಳಿಗೆ 30 ಸಾವಿರ ದುಡಿಯುತ್ತಿದ್ದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈಗಲೂ ಸಹ ಮೊದಲಿನ ಹಾಗೆ ಕೆಲಸ ಮಾಡಿಕೊಂಡಿದ್ದು, ಪರಿಹಾರ ಬರುವುದಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಲಾರಿಯ ಚಾಲಕನಿಗೆ ಡ್ರೈವಿಂಗ್ ಲೈಸನ್ಸ ಇರಲಿಲ್ಲ ಮತ್ತು ಲಾರಿಗೆ ಫರ್ಮಿಟ್ ಇರಲಿಲ್ಲ ಎಂದರೆ ಸರಿಯಲ್ಲ. ವಿಮಾ ಶರತ್ತುಗಳನ್ನು ಉಲ್ಲಂಘನೆ ಮಾಡಿದ್ದರಿಂದ 2 ನೇ ಎದುರುದಾರರು ಯಾವುದೆ ಪರಿಹಾರ ಕೊಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಅಪಘಾತ ನನ್ನ ತಪ್ಪಿನಿಂದ ಆಗಿದೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಏನೂ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.